# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ, ಹೊಳಲ್ಕೆರೆ.

## ಸಿ.ಸಿ. ನಂ. 1071/2020

ದಿನಾಂಕ 16/07/2025

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ಕೆ.ಟಿ. ರಮೇಶ್ | ಪಿ.ಡಬ್ಲ್ಯು. | 9 |
| ತಂದೆಯ ಹೆಸರು | : | ತಮ್ಮಯ್ಯ | ಸಿ.ಡಬ್ಲ್ಯು. | 15 |
| ವಯಸ್ಸು | : | 41 ವರ್ಷ | | |
| ಉದ್ಯೋಗ | : | ಪಿ.ಐ., ಹೊಸದುರ್ಗ ಪೊಲೀಸ್ ಠಾಣೆ | | |
| ವಾಸ ಸ್ಥಳ | : | ಹೊಸದುರ್ಗ | | |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ – ಮಾನ್ಯ ಸ.ಸ.ಅ. ರವರಿಂದ**

ನಾನು 26/05/2013 ರಿಂದ 25/09/2013 ರವರಗೆ ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ18/06/2013 ರಂದು ಚಾಸಾ–1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿಕೊಂಡು ಠಾಣಾ ಮೊಕದ್ದಮೆ ಸಂ.470/2013 ಪ್ರಕರಣ ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ಘನ ನ್ಯಾಯಾಲಯಕ್ಕೂ ಮತ್ತು ನನ್ನ ಮೇಲಧಿಕಾರಿಗಳಿಗೂ ನಿವೇದಿಸಿಕೊಂಡಿರುತ್ತೇನೆ. ನಂತರ ಅದೇ ದಿನ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ–1 ರವರು ತೋರಿಸಿದ ಸ್ಥಳದಲ್ಲಿ ಚಾಸಾ–2 ಮತ್ತು 3 ರವರ ಸಮಕ್ಷಮ ಮಧ್ಯಾಹ್ನ 12 ರಿಂದ 12.45 ಗಂಟೆಯವರೆಗೆ ಸ್ಥಳ ಪಂಚನಾಮೆ ಕ್ರಮವನ್ನು ಜರುಗಿಸಿ ಕಚ್ಚಾ ನಕಾಶೆಯನ್ನು ತಯಾರಿಸಿರುತ್ತೇನೆ. ನಂತರ ಅಲ್ಲಿಯೇ ಇದ್ದ ಸಾಕ್ಷಿದಾರರಾದ ಚಾಸಾ–4 ಮತ್ತು 5 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ.

ನಂತರ ಪ್ರಸ್ತುತ ಪ್ರಕರಣವು ಘೋರ ಪ್ರಕರಣವಾಗಿದ್ದರಿಂದ ಮುಂದಿನ ತನಿಖೆಗಾಗಿ

ಕಡತವನ್ನು ಚಾಸಾ-16 ರವರಿಗೆ ವಹಿಸಿಕೊಟ್ಟಿರುತ್ತೇನೆ. ಸಾಕ್ಷಿಯು ನಿಪಿ-1 ರ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-2 ರ ದೂರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಅದೇ ರೀತಿ ಸಾಕ್ಷಿಯು ಪ್ರಥಮ ವರ್ತಮಾನ ವರದಿ ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-7, ನಿಪಿ-7(ಎ) ಎಂದು ಗುರುತಿಸಲಾಯಿತು.

**ಪಾಟಿ ಸವಾಲು : 2 ಮತ್ತು 3ನೇ ಆರೋಪಿತರ ಪರ – ಶ್ರೀ ಎಸ್.ವಿ.ಕೆ. ವಕೀಲರಿಂದ**

ನಿಪಿ-2 ರ ದೂರನ್ನು ಚಾಸಾ-1 ರವರು ನೀಡಿರುವುದಿಲ್ಲ, ಬದಲಾಗಿ ನಾವೇ ಠಾಣೆಯಲ್ಲಿ ಸೃಷ್ಟಿಸಿಕೊಂಡಿರುತ್ತೇವೆ ಎಂದರೆ ಸರಿಯಲ್ಲ. ನಾನು ಯಾವುದೇ ದೂರನ್ನು ದಾಖಲಿಸಿಕೊಂಡಿಲ್ಲ ಮತ್ತು ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಯಾವುದೇ ಪಂಚನಾಮೆ ಕ್ರಮ ಜರುಗಿಸಿಲ್ಲ ಮತ್ತು ಕಚ್ಚಾ ನಕಾಶೆ ತಯಾರಿಸಿಲ್ಲ ಎಂದರೆ ಸರಿಯಲ್ಲ. ಈ ಪ್ರಕರಣದಲ್ಲಿ ಯಾವುದೇ ತನಿಖೆಯನ್ನು ಮಾಡದೇ ಇದ್ದರೂ ಸಹ ಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಪ್ರಕರಣದ ಆರೋಪಿತರಿಗೂ ಮತ್ತು ಈ ಪ್ರಕರಣಕ್ಕೂ, ಮುದ್ದೆಮಾಲುಗಳಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿದ ಸಂಗತಿಗಳೆಲ್ಲ ಸುಳ್ಳಿನಿಂದ ಕೂಡಿವೆ ಎಂದರೆ ಸರಿಯಲ್ಲ.

**4ನೇ ಆರೋಪಿತರ ಪರ ವಕೀಲರು 2 ಮತ್ತು 3ನೇ ಆರೋಪಿ ಪರ ವಕೀಲರು ಮಾಡಿದ ಪಾಟಿ ಸವಾಲನ್ನು ಅಳವಡಿಸಿಕೊಳ್ಳಲು ಕೋರಿ ಕೊಂಡಿದ್ದು, ಅನುಮತಿಸಲಾಗಿರುತ್ತದೆ.**

**ಮರು ವಿಚಾರಣೆ – ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ. ಸರಿಯಿದೆ.

C/C **ಅಪರ ಸಿವಿಲ್ ನ್ಯಾಯಾಧೀಶರು**
*ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ.*